## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ / ಅನುದಾನರಹಿತ ಪ್ರೌಢಶಾಲೆಗಳಲ್ಲಿ ಕಿರಿಯ ರೆಡ್ ಕ್ರಾಸ್ ಸಂಸ್ಥೆಗಳನ್ನು ಸ್ಥಾಪಿಸುವ ಕುರಿತು

ಓದಲಾಗಿದೆ :-

1. ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ :ಸಿಎಂಐ.2 :176 :ಜೂ.ರೆ.ಕ್ರಾ :2011-12 ದಿನಾಂಕ :20/05/2011
2. ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್ ಕ್ರಾಸ್ ಸೊಸೈಟಿ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ :ICSR/RCK/JRC-GO/C-2/CR-5/2017-18, ದಿನಾಂಕ :20/04/2017
3. ಸಭೆಯ ನಡವಳಿಯ ದಿನಾಂಕ :01/06/2019
4. ನಿರ್ದೇಶಕರು, (ಪ್ರೌಢಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ : ಸಿ4(6)/ಸ.ಪ್ರೌ.ಶಾ/ರೆಡ್.ಕ್ರಾಸ್/94/2012-13 ದಿನಾಂಕ : 07/09/2019.

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ-4ರಲ್ಲಿ *ನಿರ್ದೇಶಕರು, (ಪ್ರೌಢಶಿಕ್ಷಣ)* ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು *ಇವರ ಪತ್ರದಲ್ಲಿ* ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ / ಅನುದಾನರಹಿತ ಪ್ರೌಢಶಾಲೆಗಳಲ್ಲಿ ಕಿರಿಯ ರೆಡ್‌ಕ್ರಾಸ್ ಶಾಲೆಗಳನ್ನು ಪ್ರಾರಂಭಿಸಿ, ವಾರ್ಷಿಕವಾಗಿ ಶಾಲಾ ಸದಸ್ಯತ್ವದ ಶುಲ್ಕ 100/-ರೂಗಳನ್ನು ಪಾವತಿಸಿ ನೋಂದಾಯಿಸಿಕೊಂಡು, ಪ್ರೌಢಶಾಲಾ ವಿದ್ಯಾರ್ಥಿಗಳಿಂದ 10/-ರೂಗಳನ್ನು ಪಡೆದು ಅದರಲ್ಲಿ 6/- ರೂಗಳನ್ನು ಕಿರಿಯ ರೆಡ್‌ಕ್ರಾಸ್ ಚಟುವಟಿಕೆಗೆ ಹಾಗೂ 4/- ರೂಗಳನ್ನು ಭಾರತೀಯ ರೆಡ್‌ಕ್ರಾಸ್ ಕಾರ್ಯ ಚಟುವಟಿಕೆಗಳಿಗೆ ಉಪಯೋಗಿಸಿಕೊಳ್ಳಲು ದಿನಾಂಕ :01/06/2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ.

ಕಿರಿಯ ರೆಡ್‌ಕ್ರಾಸ್ ಶಾಖೆಗಳನ್ನು ಶಾಲೆಗಳಲ್ಲಿ ಪ್ರಾರಂಭಿಸಿಗುವುದರಿಂದ ಮಕ್ಕಳಲ್ಲಿ ಸಂಚಾರಿ ನಿಯಮ, ಸ್ವಚ್ಛತೆ, First-Aid, Disaster Management, Basic Competency skills ಬಗ್ಗೆ ತರಬೇತಿ ಶಿಬಿರಗಳನ್ನು ಹಮ್ಮಿಕೊಳ್ಳಲಾಗುವುದೆಂದು ರೆಡ್‌ಕ್ರಾಸ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಯವರು ಸದರಿ ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ. ಪ್ರೌಢಶಾಲಾ ಮಕ್ಕಳಿಗೆ ಉತ್ತಮ ತರಬೇತಿಗಳನ್ನು ನೀಡುವ ಸಂಬಂಧ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯಿಂದ ರೆಡ್‌ಕ್ರಾಸ್ ಸಂಸ್ಥೆಗೆ ಅನುದಾನವನ್ನು ನೀಡಲಾಗುವುದೆಂದು ಎಂದು ಪ್ರಸ್ತಾಪಿಸಿದ್ದು, ಮೊದಲಿಗೆ ಪ್ರೌಢಶಾಲೆಗಳಲ್ಲಿ ಕಿರಿಯ ರೆಡ್‌ಕ್ರಾಸ್ ಶಾಖೆಗಳನ್ನು ಪ್ರಾರಂಭಿಸುವ ಕುರಿತು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ದಿ:01/06/2019ರ ಸಭೆಯಲ್ಲಿ ನಿರ್ಧರಿಸಿರುವಂತೆ ರಾಜ್ಯದ ಎಲ್ಲಾ ಸರ್ಕಾರಿ ಅನುಮದಾನರಹಿತ / ಅನುದಾನಿತ ಪ್ರೌಢಶಾಲೆಗಳಲ್ಲಿ ಕಿರಿಯ ರೆಡ್‌ಕ್ರಾಸ್ ಶಾಖೆಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಸೂಕ್ತ ಆದೇಶವನ್ನು ಹೊರಡಿಸುವಂತೆ *ನಿರ್ದೇಶಕರು, (ಪ್ರೌಢಶಿಕ್ಷಣ)* ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

***ಸರ್ಕಾರಿ ಆದೇಶ ಸಂಖ್ಯೆ : ಇಡಿ 192 ಎಸ್‌ಎಲ್‌ಬಿ 2017, ಬೆಂಗಳೂರು, ದಿನಾಂಕ : 03ನೇ ಮಾರ್ಚ್ 2020.***

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ / ಅನುದಾನರಹಿತ ಪ್ರೌಢಶಾಲೆಗಳಲ್ಲಿ ವಾರ್ಷಿಕವಾಗಿ ಶಾಲಾ ಸದಸ್ಯತ್ವದ ಶುಲ್ಕ ರೂ.100/-ಗಳನ್ನು (ನೂರು ರೂಪಾಯಿಗಳು ಮಾತ್ರ) ಪಾವತಿಸಿ ನೋಂದಾಯಿಸಿಕೊಳ್ಳುವುದು ಹಾಗೂ ಪ್ರೌಢಶಾಲೆಗಳ (8 ರಿಂದ 10ನೇ ವಿದ್ಯಾರ್ಥಿಗಳು) ರೂ.10/-ಗಳನ್ನು

-2

Scanned with CamScanner

(ಹತ್ತು ರೂಪಾಯಿಗಳು ಮಾತ್ರ) ಪ್ರತಿ ವಿದ್ಯಾರ್ಥಿಗಳಿಂದ ಪಡೆದು, ಅದರಲ್ಲಿ ರೂ.6/- ಗಳನ್ನು (ಆರು ರೂಪಾಯಿಗಳು ಮಾತ್ರ) ಕಿರಿಯ ರೆಡ್‌ಕ್ರಾಸ್ ಚಟುವಟಿಕೆಗೆ ಹಾಗೂ ರೂ.4/-ಗಳನ್ನು (ನಾಲ್ಕು ರೂಪಾಯಿಗಳು ಮಾತ್ರ) ಕಿರಿಯ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಕಾರ್ಯಚಟುವಟಿಕೆಗಳಿಗೆ ಉಪಯೋಗಿಸಿಕೊಳ್ಳಲು ಸರ್ಕಾರದ ಮಂಜೂರಾತಿಯನ್ನು ನೀಡಿ ಆದೇಶಿಸಿದೆ.

ಈ ಬಗ್ಗೆ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸೂಕ್ತ ಸುತ್ತೋಲೆಯನ್ನು ಹೊರಡಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

ಹೊರಡಿಸಿದ ದಿನಾಂಕ 6/3/2020
ಸಹಿ
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

Rajyashree. V.T 3/3
(ವಿ. ಟಿ. ರಾಜ್ಯಶ್ರೀ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ).

**ಇವರಿಗೆ :-**

1. ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಅಭಿಯಾನ ಬೆಂಗಳೂರು.
4. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
5. ನಿರ್ದೇಶಕರು ಡಿ.ಎಸ್.ಇ. ಆರ್.ಟಿ ಬೆಂಗಳೂರು.
6. ನಿರ್ದೇಶಕರು (ಪ್ರೌಢಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು (ಪರೀಕ್ಷೆಗಳು) /ಇತರೆ ಕರ್ನಾಟಕ ಪ್ರೌಢಶಿಕ್ಷಣ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
8. ಎಲ್ಲಾ ಉಪ ನಿರ್ದೇಶಕರುಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆ. (ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರ ಮುಖಾಂತರ)
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :-**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬೆಂಗಳೂರು.

Scanned with CamScanner